ಸಮಗ್ರ ಶಿಕ್ಷಣ ಕರ್ನಾಟಕ
ರಾಜ್ಯ ಯೋಜನಾ ನಿರ್ದೇಶಕರ ಕಛೇರಿ,. ಕೆ,ಆರ್.ವೃತ್ತ, ನೃಪತುಂಗ ರಸ್ತೆ, ಬೆಂಗಳೂರು-01
ಸಮಗ್ರ ಶಿಕ್ಷಣ ಕರ್ನಾಟಕ

ಸಂಖ್ಯೆ: ಸಶಿಅ/ಆಚ/ ಪೋ ಕಾ/01/2023 ದಿನಾಂಕ: 24.05.202

## ಸಭಾ ಸೂಚನಾ ಪತ್ರ

ವಿಷಯ:- 9ನೇ ತರಗತಿಯ ಮೇಲ್ಪಟ್ಟ ಶಾಲಾ ಕಾಲೇಜುಗಳ ಮಕ್ಕಳಿಗೆ POCSO ಕಾಯ್ದೆಯ ಬಗ್ಗೆ ಅಗತ್ಯ ಶಿಕ್ಷಣ /ಅರಿವು ಮೂಡಿಸುವ ಕುರಿತು.

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ: ಇಪಿ 75 ಎಸ್ಎಸ್ ಬಿ 2023, ದಿನಾಂಕ: 11.05.2023

*******

ಈ ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ನಿರ್ದೇಶನದಂತೆ ಈಗಾಗಲೆ ರಚನೆಯಾಗಿರುವ ಸಮಿತಿಯ ಸಭೆಯನ್ನು ಸದರಿ ಸಮಿತಿಯ ಅಧ್ಯಕ್ಷರಾದ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 31.05.2023 ರಂದು ಬೆಳಗ್ಗೆ 11:30 ಕ್ಕೆ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇಲ್ಲಿನ ಮೂರನೆಯ ಮಹಡಿಯ ಸಭಾಂಗಣದಲ್ಲಿ ಸದರಿ ಸಮಿತಿಯ ಎಲ್ಲಾ ಸದಸ್ಯರಿಗೆ ಸಭೆ ಕರೆಯಲಾಗಿದೆ. ಸದರಿ ಸಭೆಗೆ ಸಮಿತಿಯ ಸದಸ್ಯರು ಹಾಗೂ ಪ್ರತಿನಿಧಿಗಳು ಸಭೆಗೆ ಹಾಜರಾಗಿ ಈ ವಿಷಯ ಕುರಿತು ಸಮಾಲೋಚಿಸಿ ಗೌರವಾನ್ವಿತ ನ್ಯಾಯಾಲಯದ ಆದೇಶವನ್ನು ಪಾಲಿಸುವ ದಿಸೆಯಲ್ಲಿ ತಮ್ಮ ಅಮೂಲ್ಯವಾದ ಸಲಹೆ ಸೂಚನೆಯನ್ನು ನೀಡುವಂತೆ ಕೋರಿದೆ.

ರಾಜ್ಯ ಯೋಜನಾ ನಿರ್ದೇಶಕರು ಹಾಗೂ
ಅಧ್ಯಕ್ಷರು ಪೋಕ್ಸೋ ಕಾಯಿದೆ ಅರಿವು ಮೂಡಿಸುವ ಸಮಿತಿ
ಸಮಗ್ರ ಶಿಕ್ಷಣ ಕರ್ನಾಟಕ
ಶಾಲಾ ಶಿಕ್ಷಣ ಇಲಾಖೆ

ಇವರಿಗೆ,

1. ನಿರ್ದೇಶಕರು,ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
2. ನಿರ್ದೇಶಕರು, ಡಿ.ಎಸ್. ಇ. ಆರ್ . ಟಿ. ಹೊಸಕೆರೆಹಳ್ಳಿ, ಬನಶಂಕರಿ, ಬೆಂಗಳೂರು.
3. ಯೋಜನಾ ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ವಿಶ್ವೇಶ್ವರಯ್ಯ ಚಿಕ್ಕಗೋಪುರ, ಬೆಂಗಳೂರು-01.
4. ಕಾನೂನು ಸಮಾಲೋಚಕರು ಮತ್ತು ಹಿರಿಯ ವಕೀಲರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.
5. ಮಹಾ ನಿರ್ದೇಶಕರು ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು ಇವರು ನಿಯೋಜಿಸುವ ಡಿಸಿಪಿ ಶ್ರೇಣಿಯ ಒಬ್ಬ ಅಧಿಕಾರಿ.
6. ನಿರ್ದೇಶಕರು (ಪ್ರೌಢ ಶಿಕ್ಷಣ) ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ ಬೆಂಗಳೂರು.
7. ನಿರ್ದೇಶಕರು ಅಪರ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಧಾರವಾಡ.
8. ನಿರ್ದೇಶಕರು ಅಪರ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಕಲಬುರುಗಿ.
9. ಈ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿ.

10. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಇವರು ನಿಯೋಜಿಸುವ ಜಂಟಿ ನಿರ್ದೇಶಕರ ವೃಂದದ ಒಬ್ಬ ಅಧಿಕಾರಿ.
11. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯ, ಇವರು ನಿಯೋಜಿಸುವ ಉಪ ನಿರ್ದೇಶಕರ ವೃಂದದ ಒಬ್ಬ ಅಧಿಕಾರಿ.
12. ಕಾರ್ಯಕ್ರಮ ವ್ಯವಸ್ಥಾಪಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು.
13. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬೆಂಗಳೂರು ನಗರ.
14. ತರಬೇತಿದಾರರು ಯುನಿಸೆಫ್, ಕೊಪ್ಪಳ.

ಪ್ರತಿಯನ್ನು ,

1. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ದಯಾಪರ ಮಾಹಿತಿಗಾಗಿ ಸಲ್ಲಿಸಲಾಗಿದೆ.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಮಾನ್ಯ ಉಚ್ಚ ನ್ಯಾಯಾಲಯ ಧಾರವಾಡ ಇಲ್ಲಿ ದಾಖಲಾಗಿರುವ ಕ್ರಿಮಿನಲ್ ಅಪೀಲು ಸಂಖ್ಯೆ:100515/2021ರ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯದ ತೀರ್ಪಿನ ಮೇಲೆ ಕ್ರಮವಹಿಸುವ ಬಗ್ಗೆ.

ಓದಲಾಗಿದೆ:-
1. ಸರ್ಕಾರದ ಆದೇಶ ಸಂಖ್ಯೆ: ಇಪಿ 75 ಎಸ್‌ಎಲ್‌ಬಿ 2023, ದಿನಾಂಕ: 29/04/2023.
2. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರು ರವರ ಪತ್ರ ಸಂಖ್ಯೆ: ಸಶಿಕ/ಆಚ/ಇತರೆ/01/2022-23, ದಿನಾಂಕ: 17.05.2023.

* * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮಾಂಕ(1)ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಕ್ರಿಮಿನಲ್ ಅಪೀಲು ಸಂಖ್ಯೆ:100515/2021, ಶ್ರೀ ಬಸವರಾಜ್ ವಿರುದ್ಧ ರಾಜ್ಯ ಸರ್ಕಾರ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ: 04/11/2022 ರಂದು ನೀಡಿರುವ ಆದೇಶದಂತೆ, ರಾಜ್ಯದ 9ನೇ ತರಗತಿ ಮೇಲ್ಪಟ್ಟ ಸರ್ಕಾರಿ ಅನುದಾನಿತ ಹಾಗೂ ಖಾಸಗಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ POCSO ಕಾಯ್ದೆಯ ಬಗ್ಗೆ ವಿದ್ಯಾರ್ಥಿಗಳಲ್ಲಿ ಅಗತ್ಯ ಶಿಕ್ಷಣ / ಅರಿವು ಮೂಡಿಸುವ ಸಂಬಂಧ ಹಾಗೂ ಎಲ್ಲಾ ಶಾಲೆಗಳಿಗೆ ನಿರ್ದೇಶನಗಳನ್ನು ನೀಡಲು ಅನುವಾಗುವಂತೆ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2) ರಲ್ಲಿ 18 ವರ್ಷದೊಳಗಿನ ಮಕ್ಕಳ ಮೇಲೆ ಪದೇ ಪದೇ ಲೈಂಗಿಕ ದೌರ್ಜನ್ಯಗಳು, ಕಿರಿಕುಳ ಅತ್ಯಾಚಾರಗಳ ನಡೆಯುತ್ತಿದ್ದು, ಈ ರೀತಿಯ ದುರ್ಘಟನೆಗಳನ್ನು ತಡೆಗಟ್ಟಲು ಹಾಗೂ ಮಕ್ಕಳ ರಕ್ಷಣೆ ಭದ್ರತೆ ಮತ್ತು ನ್ಯಾಯ ಒದಗಿಸುವುದರ ಜೊತೆಗೆ ಅವರ ಆಸಕ್ತಿ ಮತ್ತು ಹಿತ ಕಾಪಡುವ ಹಿನ್ನೆಲೆಯಲ್ಲಿ ಫೋಕ್ಸೋ ಕಾಯಿದೆ-2012ನ್ನು ಭಾರತ ಸರ್ಕಾರವು ಜಾರಿಗೆ ತಂದಿರುತ್ತದೆ. ಕಳೆದ 10 ವರ್ಷಗಳಲ್ಲಿ ಇಲಾಖೆಯಿಂದ ಹಲವಾರು ಮಾರ್ಗಸೂಚಿಗಳನ್ನು ಜಾರಿಗೊಳಿಸಿ ಶಾಲಾ-ಕಾಲೇಜುಗಳಲ್ಲಿ ಮಕ್ಕಳು ಶಿಕ್ಷಕರು ಹಾಗೂ ಪಾಲಕರಲ್ಲಿ ಅಗತ್ಯ ಶಿಕ್ಷಣ / ಅರಿವು ಮೂಡಿಸಲಾಗಿದೆ. ಅದಾಗಿಯೂ ಫೋಕ್ಸೋ ಕಾಯ್ದೆಯ ಉಲ್ಲಂಘನೆ ಹಾಗೂ ಶಾಲಾ / ಕಾಲೇಜುಗಳ ಹಂತದಲ್ಲಿ ಅಹಿತಕರ ಘಟನೆಗಳು ನಡೆದಿರುವ ಹಿನ್ನೆಲೆಯಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ಧಾರವಾಡ ಪೀಠ ಕ್ರಿಮಿನಲ್ ಅಪೀಲು ಸಂಖ್ಯೆ:100515/2021, ದಿನಾಂಕ:04/11/2022ರ ಆದೇಶದಲ್ಲಿ 9ನೇ ತರಗತಿ ಮೇಲ್ಪಟ್ಟ ವಿದ್ಯಾರ್ಥಿಗಳಿಗೆ ಸದರಿ ಕಾಯ್ದೆಯ ಬಗ್ಗೆ ಶಿಕ್ಷಣ ಮೂಡಿಸುವುದರೊಂದಿಗೆ ಈ ಕಾಯಿದೆಯ ಉಲ್ಲಂಘನೆಯಿಂದ ಉಂಟಾಗುವ ಪ್ರತಿಕೂಲ ಪರಿಣಾಮಗಳ ಕುರಿತು ಮಾಹಿತಿ ನೀಡಿ ಸೂಕ್ತ ಮೇಲ್ವಿಚಾರಣೆ ಮಾಡುವ ಸಬಂಧ ರಾಜ್ಯ ಮಟ್ಟದ ಸಮಿತಿ ರಚನೆ ಹಾಗೂ ಕಾರ್ಯಚರಣೆ ಷರತ್ತುಗಳನ್ನು (TOR) ಸಿದ್ದಪಡಿಸಿ ಸಲ್ಲಿಸಿರುತ್ತಾರೆ. ಸದರಿ ಸಮಿತಿಯ ಕಾರ್ಯಚರಣೆಯ ಷರತ್ತುಗಳನ್ನು (TOR) ಸಿದ್ದಪಡಿಸಿ ಕರಡು ಪಟ್ಟಿಯನ್ನು ರಚಿಸಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 75 ಎಸ್ ಎಲ್ ಬಿ 2023**
**ಬೆಂಗಳೂರು, ದಿನಾಂಕ:25/05/2023**

ಈ ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಕ್ರಿಮಿನಲ್ ಅಪೀಲು ಸಂಖ್ಯೆ:100515/2021, ಶ್ರೀ ಬಸವರಾಜ್ ವಿರುದ್ಧ ರಾಜ್ಯ ಸರ್ಕಾರ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ: 04/11/2022 ರಂದು ನೀಡಿರುವ ಆದೇಶದಂತೆ, ರಾಜ್ಯದ 9ನೇ ತರಗತಿ ಮೇಲ್ಪಟ್ಟ ಸರ್ಕಾರಿ ಅನುದಾನಿತ ಹಾಗೂ ಖಾಸಗಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ POCSO ಕಾಯ್ದೆಯ ಬಗ್ಗೆ ವಿದ್ಯಾರ್ಥಿಗಳಲ್ಲಿ ಅಗತ್ಯ ಶಿಕ್ಷಣ / ಅರಿವು ಮೂಡಿಸುವ

ಸಂಬಂಧ ಹಾಗೂ ಎಲ್ಲಾ ಶಾಲೆಗಳಿಗೆ ನಿರ್ದೇಶನಗಳನ್ನು ನೀಡಲು ಅನುವಾಗುವಂತೆ ರಚಿಸಲಾಗಿರುವ ಸಮಿತಿಯ ಉದ್ದೇಶಗಳು ಹಾಗೂ ಕಾರ್ಯಾಚರಣೆಯ ಷರತ್ತುಗಳನ್ನು ಸರ್ಕಾರವು ಈ ಕೆಳಕಂಡಂತೆ ರಚಿಸಿ ಆದೇಶಿಸಿದೆ.

**ಉದ್ದೇಶಗಳು:-**

1. ರಾಜ್ಯದಲ್ಲಿನ ಪ್ರತಿಯೊಂದು ಮಗುವು ಎಲ್ಲಾ ಸಂದರ್ಭಗಳಲ್ಲಿಯೂ ಎಲ್ಲಾ ರೀತಿಯ ಹಿಂಸೆ ನಿರ್ಲಕ್ಷ್ಯ ಮತ್ತು ಶೋಷಣೆಯಿಂದ ರಕ್ಷಣೆ ಮತ್ತು ಸುರಕ್ಷತೆಯ ಮನೋಭಾವ ವೃದ್ಧಿಸುವುದು.
2. ರಾಜ್ಯದ ಮಕ್ಕಳಿಗೆ ಪೋಕ್ಸೋ ಕಾಯಿದೆ-2012, ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016 ಬಗ್ಗೆ ಅರಿವು ಮೂಡಿಸುವುದು.
3. ರಾಜ್ಯದ ಮಕ್ಕಳಲ್ಲಿ ದೌರ್ಜನ್ಯದಿಂದ ತಮ್ಮನ್ನು ತಾವು ರಕ್ಷಿಸಿಕೊಳ್ಳುವ ಮನೋಸ್ಥೈರ್ಯ ಬೆಳೆಸುವುದು.

**ಷರತ್ತುಗಳು**

1. ಸಮಿತಿಯು ರಾಜ್ಯದ 9ನೇ ತರಗತಿಯಿಂದ ಮೇಲ್ಪಟ್ಟ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಪೋಕ್ಸೋ ಕಾಯ್ದೆಯ ಬಗ್ಗೆ ಕಾನೂನು ಶಿಕ್ಷಣ / ಅರಿವು ಮೂಡಿಸಲು ಸಂಪನ್ಮೂಲ ಸಾಮಗ್ರಿಗಳನ್ನು ಅಭಿವೃದ್ಧಿಗೊಳಿಸುವುದು/ ಸಿದ್ಧಪಡಿಸಿವುದು.
2. ಆರಂಭಿಕವಾಗಿ ರಾಜ್ಯಮಟ್ಟದಲ್ಲಿ ಸಮಿತಿಯು ಪ್ರಥಮ ಸಭೆಯನ್ನು ಕರೆದು, ಚರ್ಚಿಸಿ ರಾಜ್ಯದ ವಸ್ತು ಸ್ಥಿತಿಯನ್ನು ಅವಲೋಕಿಸಿ ಸಂಪನ್ಮೂಲ ಸಾಮಗ್ರಿಯು ಒಳಗೊಳ್ಳಬೇಕಾದ ಅಂಶಗಳನ್ನು ಗುರುತಿಸುವುದು.
3. ಹೀಗೆ ಗುರುತಿಸಲಾದ ಅಂಶ/ ಚಟುವಟಿಕೆಗಳನ್ನು ಅನುಷ್ಠಾನ ಮಾಡಲು ಸೂಕ್ತ ನಿರ್ದೇಶನಗಳನ್ನು ಜಿಲ್ಲಾ ಮತ್ತು ತಾಲ್ಲೂಕು ಹಂತಕ್ಕೆ ನೀಡುವುದು.
4. ಪಠ್ಯಕ್ರಮ ರಚನಾ ಸಾಮಗ್ರಿಗಳು ಮಕ್ಕಳ ಚಟುವಟಿಕೆಗಳನ್ನು ಸಂಘ ಸಂಸ್ಥೆಗಳು / ಘಟನೆಗಳಿಗೆ ಪೋಕ್ಸೋ ಸಂಬಂಧಿತ ಕಾನೂನು ಅರಿವು ಮೂಡಿಸಲು ಪಠ್ಯ ಕ್ರಮದಲ್ಲಿ ಸೇರ್ಪಡೆ ಬ್ಯಾಗ್ಲೆಸ್ ಡೆ ಚಟುವಟಿಕೆಗಳು, ಮಕ್ಕಳ ಕ್ಲಬ್ ಚಟುವಟಿಕೆಗಳ ಮೂಲಕ ನಿರ್ವಹಿಸಲು ಸೂಚನೆ / ನಿರ್ದೇಶನಗಳನ್ನು ನೀಡಿ ಅವಲೋಕನ ಮತ್ತು ಹಿಮ್ಮಾಹಿತಿ ಪಡೆಯುವುದು.
5. ಪದವಿ ಪೂರ್ವ ಶಿಕ್ಷಣ ಹಂತಗಳಲ್ಲಿ ಎನ್ ಎಸ್ ಎಸ್, ಎನ್. ಸಿ.ಸಿ, ಭಾರತ್ ಸ್ಕೌಟ್ಸ್ & ಗೈಡ್ಸ್ ಭಾರತ್ ಸೇವಾದಳ ಹಾಗೂ ಮತ್ತಿತರ ಯುವ ಸಂಘ ಸಂಸ್ಥೆಗಳ ಮುಖಾಂತರ ಶಾಲಾ ಕಾಲೇಜುಗಳಲ್ಲಿ ಪೋಕ್ಸ್ ಸಂಬಂಧಿತ ಕಾನೂನು ಅರಿವು ಮೂಡಿಸಲು ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಜಿಲ್ಲಾ ಹಂತಕ್ಕೆ ಸೂಚಿಸುವುದು.
6. ಜಿಲ್ಲಾ ಮತ್ತು ತಾಲ್ಲೂಕು ಹಂತದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಇತರೆ ಸಹ ಸಂಬಂಧಿ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಪೋಕ್ಸ್ ಕಾಯ್ದೆಯ ಮಾಹಿತಿ ಹಾಗೂ ಕಾಯ್ದೆಯ ಉಲಂಘನೆಯಿಂದ ಉಂಟಾಗುವ ನಕಾರಾತ್ಮಕ ಪರಿಣಾಮಗಳ ಕುರಿತು ಅರಿವು ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಲು ಅಗತ್ಯ ಕ್ರಮವಹಿಸುವ ಬಗ್ಗೆ ಕೈಪಿಡಿಯಲ್ಲಿ ವಿವರಿಸುವುದು.
7. ವಿಶೇಷವಾಗಿ ವಸತಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುವ ಶಿಕ್ಷಕರನ್ನೊಳಗೊಂಡಂತೆ ವಸತಿ ಶಾಲೆಯ ಇತರೆ ಸಿಬ್ಬಂದಿಗಳಿಗೂ ಈ ಕುರಿತು ಜಾಗೃತಿ ಮೂಡಿಸಲು ಅಗತ್ಯ ಮಾಹಿತಿಯನ್ನು ಸೇರ್ಪಡೆಗೊಳಿಸುವುದು.

**ಸಮಿತಿಯ ಕಾರ್ಯ ನಿರ್ವಹಣೆಯ ಸಮಯ ಹಂಚಿಕೆ ಪಟ್ಟಿ:**

| ಕ್ರ.ಸಂ | ಚಟುವಟಿಕೆ ವಿವರ | ಜವಬ್ದಾರಿ | ಸಮಯ |
|---|---|---|---|
| 1 | ಪ್ರಥಮ ಸಮಿತಿ ಸಭೆಯ ಆಯೋಜನೆ | ಸಮಿತಿಯ ಸದಸ್ಯ ಕಾರ್ಯದರ್ಶಿ (ಅಧ್ಯಕ್ಷರ ಸಮಾಲೋಚನೆಯೊಂದಿಗೆ | ಮೇ ನಾಲ್ಕನೇ ವಾರ |

| | | | |
|---|---|---|---|
| 2 | ಇತರೆ ಸಹ ಸಂಬಂಧಿತ ಇಲಾಖೆಗಳೊಂದಿಗೆ ಸಮನ್ವಯ ಸಭೆಗಳನ್ನು ಜಿಲ್ಲಾ ಹಂತದಲ್ಲಿ ಆಯೋಜಿಸುವುದು. | ಶಾಲಾ ಶಿಕ್ಷಣ ಇಲಾಖೆ | ಜೂನ್ ಮೊದಲನೇವಾರ |
| 3 | ಕರಡು ಸಾಮಗ್ರಿ ತಯಾರಿ | ಸಮಿತಿ | ಜೂನ್ ಮೂರನೇವಾರ |
| 4 | ಅಂತಿಮ ಪ್ರತಿ ಸಿದ್ದಪಡಿಸಿ ಸಾಫ್ಟ್ ಪ್ರತಿಯನ್ನು ಜಿಲ್ಲೆಗಳಿಗೆ ಹಂಚಿಕೆ ಮಾಡುವುದು. | ಸಮಿತಿ | ಜುಲೈ ಮೊದಲನೇ ವಾರ |
| 5 | ಜಿಲ್ಲಾ / ಬ್ಲಾಕ್ ಹಂತಕ್ಕೆ ಸುತ್ತೋಲೆ/ ಜ್ಞಾಪನ ಹೊರಡಿಸಿ ಸಾಮಗ್ರಿ ಬಳಸುವ ಬಗ್ಗೆ ಮಾರ್ಗದರ್ಶನ ಮಾಡುವುದು. | ಸಮಿತಿ | ಜುಲೈ ಮೂರನೇ ವಾರದಿಂದ ಮಾರ್ಚ್ ಅಂತ್ಯದವರೆಗೆ |
| 6 | ಜಿಲ್ಲಾ / ಬ್ಲಾಕ್ ಹಂತದಿಂದ ಚಟುವಟಿಕೆಗಳ ವರದಿ ಪಡೆಯುವುದು. | ಸಮಿತಿ | |

ಕಾರ್ಯನುಷ್ಠಾನದ ಫಲಿತಗಳು:-

ಈ ಎಲ್ಲಾ ಕಾರ್ಯ ಚಟುವಟಿಕೆಯ ಅನುಷ್ಠಾನದ ನಂತರ:

1. ರಾಜ್ಯದ ಎಲ್ಲಾ ಮಕ್ಕಳಿಗೂ ಫೋಕ್ಸೋ-2012 ಕಾಯಿದೆ ಕುರಿತು ಅಗತ್ಯ ಶಿಕ್ಷಣ ಮತ್ತು ಅರಿವು ಮೂಡುತ್ತದೆ.
2. ರಾಜ್ಯದಲ್ಲಿ ಫೋಕ್ಸೋ ಕಾಯಿದೆಯ ಉಲಂಘನೆ ತಪ್ಪುತ್ತದೆ
3. ಜಿಲ್ಲಾ ಮತ್ತು ಬ್ಲಾಕ್ ಹಂತದಲ್ಲಿ ಫೋಕ್ಸ್ ಕಾಯಿದೆ ಕುರಿತು ಅಗತ್ಯ ಶಿಕ್ಷಣ ಮತ್ತು ಅರಿವಿನ ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳುತ್ತದೆ.
4. ರಾಜ್ಯದ ಮಕ್ಕಳು ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳುವಲ್ಲಿ ಹಾಗೂ ಉತ್ತಮ ನಾಗರೀಕರಾಗಿ ರೂಪುಗೊಳ್ಳುವಲ್ಲಿ ಕಾರ್ಯ ಚಟುವಟಿಕೆಗಳು ಸಹಕಾರಿಯಾಗಲಿದೆ.
5. ರಾಜ್ಯದ ಮಕ್ಕಳಲ್ಲಿ ದೌರ್ಜನ್ಯದಿಂದ ತಮ್ಮನ್ನು ತಾವು ರಕ್ಷಿಸಿಕೊಳ್ಳುವ ಮನೋಸ್ಥೈರ್ಯ ಹೆಚ್ಚುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

V.S. 25/5/2023

(ವಿ. ಶ್ರೀನಿವಾಸಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರೌಢ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ ರಾಜ್ಯ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಮಹಾ ನಿರ್ದೇಶಕರು ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.

6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8. ರಿಜಿಸ್ಟ್ರಾರ್, ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು.
9. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
10. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
11. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ. 18ನೇ ಕ್ರಾಸ್, ಮೆಲ್ಲೇಶ್ವರಂ, ಬೆಂಗಳೂರು
13. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
14. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರ್ಗಿ.
15. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ.
16. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಬೆಂಗಳೂರು.
17. ನಿರ್ದೇಶಕರು (ಪ್ರೌಢಶಿಕ್ಷಣ) ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
18. ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಧಾರವಾಡ.
19. ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಕಲಬುರುಗಿ.
20. ಯೋಜನಾ ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ವಿಶ್ವೇಶ್ವರಯ್ಯ ಚಿಕ್ಕಗೋಪುರ ಬೆಂಗಳೂರು.
21. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬೆಂಗಳೂರು ನಗರ.
22. ತರಬೇತಿದಾರರು, ಯುನಿಸೆಫ್, ಕೊಪ್ಪಳ.
23. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಇಲಾಖೆ ರವರು ಆಪ್ತ ಕಾರ್ಯದರ್ಶಿಯವರು, ಬಹುಮಹಡಿ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಪರ ಕಾರ್ಯದರ್ಶಿ (ಆಡಳಿತ), ಶಾಲಾ ಶಿಕ್ಷಣ ಇಲಾಖೆ ರವರು ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಕಾರ್ಯದರ್ಶಿ (ಸೇವೆಗಳು), ಶಾಲಾ ಶಿಕ್ಷಣ ಇಲಾಖೆ ರವರು ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ (ಸೇವೆಗಳು-2), ಶಾಲಾ ಶಿಕ್ಷಣ ಇಲಾಖೆ ರವರು ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಪದವಿ ಪೂರ್ವ / ಪ್ರಾಥಮಿಕ / ಆಡಳಿತ / ಸಾಮಾನ್ಯ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.

Madane

(68)

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಸರ್ಕಾರಿ / ಅನುದಾನಿತ / ಖಾಸಗಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಪೋಕ್ಸೋ ಕಾಯ್ದೆಯ ಬಗ್ಗೆ ಅರಿವು ಮೂಡಿಸಲು ಸಮಿತಿ ರಚಿಸುವ ಬಗ್ಗೆ.

ಓದಲಾಗಿದೆ:-

1. ಮಾನ್ಯ ಉಚ್ಚ ನ್ಯಾಯಾಲಯದ ಕ್ರಿಮಿನಲ್ ಅಪೀಲು ಅರ್ಜಿ ಸಂಖ್ಯೆ:100515/2021, ದಿನಾಂಕ: 04.11.2021.
2. ಹೆಚ್ಚುವರಿ ಸರ್ಕಾರಿ ವಕೀಲರು ಇವರ ಪತ್ರ ದಿನಾಂಕ:06.02.2023.
3. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಸಿ4(4)ಪೋ.ಕಾ. ಅನುಷ್ಠಾನ/06/2022-23, ದಿನಾಂಕ:13/03/2023.
4. ಅಡಿಷನಲ್ ರಾಜ್ಯ ಪಬ್ಲಿಕ್ ಪ್ರಾಸಿಕ್ಯೂಟರ್ ಇವರ ಪತ್ರ ದಿನಾಂಕ: 17/04/2023.
5. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಇ-ಆಫೀಸ್ ಏಕ ಕಡತ ಸಂಖ್ಯೆ:WCDSEC-SBB/32/2023.
6. ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ:DPUE-ACAOOTH54/2023-ACADEMIC-DEPARTMENT OF PRE UNIVERSITY EDUCATION, ದಿನಾಂಕ:27.03.2023.
7. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರು ರವರ ಪತ್ರ ಸಂಖ್ಯೆ: ಸಶಿಕ/ಆಚ/ಇತರೆ/01/2022-23, ದಿನಾಂಕ: 21.04.2023.

* * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮಾಂಕ(1)ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಕ್ರಿಮಿನಲ್ ಅಪೀಲು ಸಂಖ್ಯೆ:100515/2021, ಶ್ರೀ ಬಸವರಾಜ್ ವಿರುದ್ಧ ರಾಜ್ಯ ಸರ್ಕಾರ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:04/11/2022ರಂದು ತೀರ್ಪು ನೀಡಿದ್ದು, ಅದರ ಉದ್ಧೃತ ಭಾಗ ಕೆಳಕಂಡಂತಿದೆ.

29.8. Having come across several cases relating to minor girls above the age of 16 years having fallen in love and eloped and in the meantime, having had sexual intercourse with the boy, we are of the considered opinion that the Law Commission of India would have to rethink on the age criteria, so as to take into consideration the ground realities.

29.9. The aspect of consent even by a girl of 16 years and above would have to be considered if there is indeed an offence under the IPC and/or POCSO Act. Normally when evidence is lead the victim is a major and the testimony given then of an act committed while being a minor would have to be given due value.

29.10. It is also seen that many of the above offences which are deemed offences are deemed to have been committed as a result of or on account of lack of knowledge on the part of the minor girl and boy. Many a time the boy and girl involved are either closely related and/or very well known to each other being class mates or otherwise. One thing leads to the other and being of an impressionable age, some things are

(67)

done by a boy and girl, which ought not to have been done and done without knowing the applicability of POCSO Act or certain provisions of the IPC, which make them an offence. Though lack of knowledge of law is no excuse, can minors be presumed to have knowledge of the applicable law would be the question required to be asked in such a situation.

29.11. In the above background, it is required that students, especially at least of IX standard onwards, are educated on the aspects of POCSO Act, the acts which are criminalized under the POCSO Act as also under the Indian Penal Code.

29.12. The Principal Secretary, Education Department is directed to constitute a Committee to formulate suitable education material in relation to the above and thereafter issue necessary directions to all schools be it Government or private, stating that such students are to be educated and forewarned of the consequence of their action, if in violation of the POCSO Act or the IPC.

29.13. Necessary compliance report as regards initially the formulation of a Committee and the terms of reference of the said Committee to be placed before this Court within a period of four weeks from today.

30. Hence we pass the following order:

**ORDER**

i. Appeal is dismissed.

ii. Though the above appeal is dismissed, re-list on 05.12.2022 for reporting compliance.

iii. The Additional Registrar (General) of this Court is directed to forward a copy of the above order to the Principal Secretary, Education Department, Government of Karnataka for necessary action.

iv. The Additional Registrar (General) is also directed to forward a copy of this order to the Chairman.

ಈ compliance ಗೆ ಸಂಬಂಧಿಸಿದಂತೆ ದಿನಾಂಕ 13-12-2022 ಈ ಪ್ರಕರಣವನ್ನು ವಿಚಾರಣೆಗೆ ತೆಗೆದುಕೊಂಡಿದ್ದು, ಆ ಸಮಯದಲ್ಲಿ ಈ ಕೆಳಕಂಡಂತೆ ಆದೇಶ ನೀಡಲಾಗಿರುತ್ತದೆ:

1. Compliance report is yet to be filed.
2. The Additional Registrar (Judicial) is directed to furnish a copy of the order dated 04-11-2022 to the learned Additional Advocate General, so as to enable her to inform the Secretary, Department of Education and the Secretary, Women & Child Welfare Department for the compliance required, more particularly as regards the Sex Education being provided to the students of High School and upwards as also sensitizing them with regard to applicable Laws more particularly Protection of Children from Sexual Offences Act, 2012.

ಮೇಲೆ ಓದಲಾದ ಕ್ರಮಾಂಕ (3)ರಲ್ಲಿ ಆಯುಕ್ತರು,ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ವ್ಯಾಪಿಯಲ್ಲಿ 9 ಮತ್ತು 10ನೇ ತರಗತಿಗಳು ಬರುತ್ತದೆ. ರಾಜ್ಯದ ಎಲ್ಲಾ ಶಾಲೆಗಳಲ್ಲಿ POCSO ಕಾಯ್ದೆ 2012ನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಕುರಿತು ಸುತ್ತೋಲೆಯನ್ನು ಹೊರಡಿಸಲಾಗಿದೆ. ಮಾನ್ಯ ನ್ಯಾಯಾಲಯದ ಆದೇಶದಂತೆ 10ನೇ ತರಗತಿ

ಮೇಲ್ಪಟ್ಟು 11 & 12ನೇ ತರಗತಿಗಳು ಪದವಿ ಪೂರ್ವ ಶಿಕ್ಷಣ ಇಲಾಖೆ ವ್ಯಾಪ್ತಿಗೆ ಬರುತ್ತದೆ. ಆದ್ದರಿಂದ ಸದರಿ ಸಮಿತಿ ರಚಿಸಿದ ಕುರಿತು ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಮತ್ತು ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ ಇವರ ಸಹಯೋಗದೊಂದಿಗೆ ಸದರಿ ಸಮಿತಿ ರಚಿಸುವಂತೆ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (4) ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಕ್ರಿಮಿನಲ್ ಅಪೀಲು ಸಂಖ್ಯೆ:100515/2021ರ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ನೀಡಿರುವ ಆದೇಶದಲ್ಲಿನ ಅಂಶ 29.11, 29.12 ಮತ್ತು 29.13ರಲ್ಲಿನ ನಿರ್ದೇಶನದಂತೆ 9ನೇ ತರಗತಿಯ ಮೇಲ್ಪಟ್ಟ ಮಕ್ಕಳಿಗೆ POCSO ಕಾಯ್ದೆಯ ಅರಿವು ಮೂಡಿಸುವ ಬಗ್ಗೆ ಸಮಿತಿಯನ್ನು ರಚಿಸಿ ಮತ್ತು ನಿಯಮಗಳನ್ನು ರೂಪಿಸಲು ಕೈಗೊಂಡ ಕ್ರಮದ ವರದಿಯನ್ನು ಮುಂದಿನ ವಿಚಾರಣಾ ದಿನಾಂಕ:12/06/2023ರಂದು ಮಾನ್ಯ ನ್ಯಾಯಾಲಯಕ್ಕೆ ಒದಗಿಸುವಂತೆ ಸೂಚಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (5) ರಲ್ಲಿ ಮಾನ್ಯ ನ್ಯಾಯಾಲಯವು ನೀಡಿರುವ ನಿರ್ದೇಶನದಂತೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಸಮಿತಿಯ ಸದಸ್ಯರುಗಳನ್ನಾಗಿ ನೇಮಿಸಬಹುದಾದ ಕೆಳಕಂಡ ಅಧಿಕಾರಿಗಳ ಮಾಹಿತಿಯೊಂದಿಗೆ ಕಡತವನ್ನು ಶಿಕ್ಷಣ ಇಲಾಖೆಗೆ ಕಳುಹಿಸಿರುತ್ತಾರೆ.

1. ಯೋಜನಾ ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು.
2. ಕಾರ್ಯಕ್ರಮ ವ್ಯವಸ್ಥಾಪಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು.
3. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬೆಂಗಳೂರು ನಗರ.
4. ತರಬೇತಿದಾರರು, ಯುನಿಸೆಫ್, ಕೊಪ್ಪಳ.

ಮೇಲೆ ಓದಲಾದ ಕ್ರಮಾಂಕ (6) ರಲ್ಲಿ POCSO ಕಾಯ್ದೆಯ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ಒದಗಿಸಲು ಪಠ್ಯ ವಸ್ತು ಸಿದ್ಧಪಡಿಸಲು ಸರ್ಕಾರಿ ನ್ಯಾಯಾಧೀಶರು / ವಕೀಲರು, ಒಬ್ಬರು ಹಿರಿಯ ಪೋಲಿಸ್ ಅಧಿಕಾರಿ, ಮಕ್ಕಳ ಕಲ್ಯಾಣ ಸಮಿತಿಯ ಒಬ್ಬರು ಅಧಿಕಾರಿ, ಒಬ್ಬರು ಸಮಾಜ ಕಲ್ಯಾಣ ಅಧಿಕಾರಿ, ಶಿಕ್ಷಣ ಸೇವಕರು, ಸರ್ಕಾರಿ ಹಿರಿಯ ವೈದ್ಯಾಧಿಕಾರಿಗಳು ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳನ್ನೊಳಗೊಂಡಂತೆ ಸಮಿತಿ ರಚಿಸಿ ಸಮಿತಿಯ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳಿಗೆ POCSO ಕಾಯ್ದೆಯ ಅರಿವು ಕಾರ್ಯಕ್ರಮದ ರೂಪುರೇಷೆಗಳನ್ನು ಸರ್ಕಾರದ ಹಂತದಲ್ಲಿ ಸಿದ್ಧಪಡಿಸಬಹುದಾಗಿದೆ ಎಂದು ತಿಳಿಸಿರುತ್ತಾರೆ.

ಮೇಲೆ ಕ್ರಮಾಂಕ (7)ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯ ಧಾರವಾಡ ಪೀಠ ಇಲ್ಲಿ ದಾಖಲಾಗಿರುವ ಕ್ರಿಮಿನಲ್ ಅಪೀಲ್ ಸಂಖ್ಯೆ: 100515/2020ರ ಪ್ರಕರಣದಲ್ಲಿ, ಮಾನ್ಯ ನ್ಯಾಯಾಲಯವು ಆದೇಶದಲ್ಲಿನ ಅಂಶ 29.11, 29.12 2011 ಮತ್ತು 29.13ರಲ್ಲಿ ನೀಡಿರುವ ನಿರ್ದೇಶನದಂತ 9 ನೇ ತರಗತಿಯ ಮೇಲ್ಪಟ್ಟ, ಮಕ್ಕಳಿಗೆ POCSO ಕಾಯ್ದೆಯ ಅರಿವು ಮೂಡಿಸುವ ಬಗ್ಗೆ ಸಮಿತಿಯನ್ನು ರಚಿಸಿ ಮತ್ತು ನಿಯಮಗಳನ್ನು ಸಿದ್ಧಪಡಿಸಲು ನಿರ್ದೇಶನ ನೀಡಿದ್ದು, ಅದರಂತೆ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಬೆಂಗಳೂರು ಮತ್ತು ನಿರ್ದೇಶಕರು ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ ಇವರುಗಳ ಸಹಯೋಗದೊಂದಿಗೆ ಕರಡು ಸಮಿತಿಯನ್ನು ರಚಿಸುವ ಬಗ್ಗೆ, ಕರಡು ಪಟ್ಟಿಯನ್ನು ಈ ಕೆಳಕಂಡಂತೆ ಸಿದ್ಧಪಡಿಸಿ ಸರ್ಕಾರದ ಆದೇಶ ಹೊರಡಿಸಲು ಕೋರಿರುತ್ತಾರೆ.

**POCSO ಕಾಯ್ದೆಯ ಅರಿವು ಮೂಡಿಸುವ ಬಗ್ಗೆ ರಾಜ್ಯಮಟ್ಟದ ಸಮಿತಿ**

| ಕ್ರ. ಸಂ | ಹುದ್ದೆಯ ವಿವರ | ಸದಸ್ಯರು |
|---|---|---|
| 1 | ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು. | ಅಧ್ಯಕ್ಷರು |
| 2 | ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |

| | | |
|---|---|---|
| 3 | ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಬೆಂಗಳೂರು | ಸದಸ್ಯರು |
| 4 | ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ವಿಶ್ವೇಶ್ವರಯ್ಯ ಚಿಕ್ಕಗೋಪುರ ಬೆಂಗಳೂರು-01 | ಸದಸ್ಯರು |
| 5 | ನಿರ್ದೇಶಕರು (ಪ್ರೌಢಶಿಕ್ಷಣ) ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 6 | ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಧಾರವಾಡ. | ಸದಸ್ಯರು |
| 7 | ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಕಲಬುರುಗಿ. | ಸದಸ್ಯರು |
| 8 | ನಿರ್ದೇಶಕರು (ಗುಣಮಟ್ಟ), ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು | ಸದಸ್ಯ ಕಾರ್ಯದರ್ಶಿ |
| 9 | ಈ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಒಬ್ಬರು ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿಗಳು | ಸದಸ್ಯರು |
| 10 | ಜಂಟಿ ನಿರ್ದೇಶಕರು, ಆಯುಕ್ತರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು | ಸದಸ್ಯರು |

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 75 ಎಸ್ ಎಲ್ ಬಿ 2023**

**ಬೆಂಗಳೂರು, ದಿನಾಂಕ: 29/04/2023**

ಈ ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಕ್ರಿಮಿನಲ್ ಅಪೀಲು ಸಂಖ್ಯೆ:100515/2021, ಶ್ರೀ ಬಸವರಾಜ್ ವಿರುದ್ಧ ರಾಜ್ಯ ಸರ್ಕಾರ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ: 04/11/2022 ರಂದು ನೀಡಿರುವ ಆದೇಶದಂತೆ, ರಾಜ್ಯದ ೯ನೇ ತರಗತಿ ಮೇಲ್ಪಟ್ಟ ಸರ್ಕಾರಿ ಅನುದಾನಿತ ಹಾಗೂ ಖಾಸಗಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ POCSO ಕಾಯ್ದೆಯ ಬಗ್ಗೆ ವಿದ್ಯಾರ್ಥಿಗಳಲ್ಲಿ ಅಗತ್ಯ ಶಿಕ್ಷಣ / ಅರಿವು ಮೂಡಿಸುವ ಸಂಬಂಧ ಹಾಗೂ ಎಲ್ಲಾ ಶಾಲೆಗಳಿಗೆ ನಿರ್ದೇಶನಗಳನ್ನು ನೀಡಲು ಅನುವಾಗುವಂತೆ ಸರ್ಕಾರವು ಈ ಕೆಳಕಂಡಂತೆ ಸಮಿತಿಯನ್ನು ರಚಿಸಿ ಆದೇಶಿಸಿದೆ.

**POCSO ಕಾಯ್ದೆಯ ಅರಿವು ಮೂಢಿಸುವ ಬಗ್ಗೆ ರಾಜ್ಯಮಟ್ಟದ ಸಮಿತಿ**

| ಕ್ರ. ಸಂ. | ಹುದ್ದೆಯ ವಿವರ | ಸದಸ್ಯರು |
|---|---|---|
| 1. | ರಾಜ್ಯ ಯೋಜನಾ ನಿರ್ದೇಶಕರು,<br>ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು. | ಅಧ್ಯಕ್ಷರು |
| 2. | ನಿರ್ದೇಶಕರು,<br>ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 3. | ನಿರ್ದೇಶಕರು,<br>ರಾಜ್ಯ ಶಿಕ್ಷಣ ಸಂಶೋಧನೆ ಮತ್ತು<br>ತರಬೇತಿ ಇಲಾಖೆ, ಬೆಂಗಳೂರು | ಸದಸ್ಯರು |
| 4. | ಯೋಜನಾ ನಿರ್ದೇಶಕರು,<br>ಮಕ್ಕಳ ರಕ್ಷಣಾ ನಿರ್ದೇಶನಾಲಯ ವಿಶ್ವೇಶ್ವರಯ್ಯ ಚಿಕ್ಕಗೋಪುರ ಬೆಂಗಳೂರು-01 | ಸದಸ್ಯರು |

64

| | | |
|---|---|---|
| 5. | ಕಾನೂನು ಸಮಾಲೋಚಕರು ಮತ್ತು ಹಿರಿಯ ವಕೀಲರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ. | ಸದಸ್ಯರು |
| 6. | ಮಹಾ ನಿರ್ದೇಶಕರು ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು ಇವರು ನಿಯೋಜಿಸುವ ಡಿಸಿಪಿ ಶ್ರೇಣಿಯ ಒಬ್ಬ ಅಧಿಕಾರಿ. | ಸದಸ್ಯರು |
| 7. | ನಿರ್ದೇಶಕರು (ಪ್ರೌಢಶಿಕ್ಷಣ) ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 8. | ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಧಾರವಾಡ. | ಸದಸ್ಯರು |
| 9. | ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಕಲಬುರುಗಿ. | ಸದಸ್ಯರು |
| 10. | ನಿರ್ದೇಶಕರು (ಗುಣಮಟ್ಟ), ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು. | ಸದಸ್ಯ ಕಾರ್ಯದರ್ಶಿ |
| 11. | ಈ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಒಬ್ಬರು ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿಗಳು. | ಸದಸ್ಯರು |
| 12. | ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ನಿಯೋಜಿಸುವ ಜಂಟಿ ನಿರ್ದೇಶಕರ ವೃಂದದ ಒಬ್ಬ ಅಧಿಕಾರಿ. | ಸದಸ್ಯರು |
| 13. | ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯ ಇವರು ನಿಯೋಜಿಸುವ ಉಪನಿರ್ದೇಶಕರ ವೃಂದದ ಒಬ್ಬ ಅಧಿಕಾರಿ. | ಸದಸ್ಯರು |
| 14. | ಕಾರ್ಯಕ್ರಮ ವ್ಯವಸ್ಥಾಪಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು. | ಸದಸ್ಯರು |
| 15. | ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬೆಂಗಳೂರು ನಗರ. | ಸದಸ್ಯರು |
| 16. | ತರಬೇತಿದಾರರು, ಯುನಿಸೆಫ್, ಕೊಪ್ಪಳ. | ಸದಸ್ಯರು |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

V. S. 29/4/2023

(ವಿ. ಶ್ರೀನಿವಾಸಮೂರ್ತಿ)

ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರೌಢ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

29.4.2023

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ ರಾಜ್ಯ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಮಹಾ ನಿರ್ದೇಶಕರು ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8. ರಿಜಿಸ್ಟ್ರಾರ್, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
9. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
10. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.

11. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

12. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ. 18ನೇ ಕ್ರಾಸ್, ಮೆಲ್ಲೇಶ್ವರಂ, ಬೆಂಗಳೂರು

13. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.

14. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರ್ಗಿ.

15. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ.

16. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಬೆಂಗಳೂರು.

17. ನಿರ್ದೇಶಕರು (ಪ್ರೌಢಶಿಕ್ಷಣ) ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.

18. ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಧಾರವಾಡ.

19. ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಕಲಬುರುಗಿ.

20. ಯೋಜನಾ ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ವಿಶ್ವೇಶ್ವರಯ್ಯ ಚಿಕ್ಕಗೋಪುರ ಬೆಂಗಳೂರು.

21. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬೆಂಗಳೂರು ನಗರ.

22. ತರಬೇತಿದಾರರು, ಯುನಿಸೆಫ್, ಕೊಪ್ಪಳ.

23. ಶಾಖಾ ರಕ್ಷಾ ಕಡತ // ಹೆಚ್ಚುವರಿ ಪ್ರತಿಗಳು.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಇಲಾಖೆ ರವರು ಆಪ್ತ ಕಾರ್ಯದರ್ಶಿಯವರು, ಬಹುಮಹಡಿ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಪರ ಕಾರ್ಯದರ್ಶಿ (ಆಡಳಿತ), ಶಾಲಾ ಶಿಕ್ಷಣ ಇಲಾಖೆ ರವರು ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಕಾರ್ಯದರ್ಶಿ (ಸೇವೆಗಳು), ಶಾಲಾ ಶಿಕ್ಷಣ ಇಲಾಖೆ ರವರು ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ (ಸೇವೆಗಳು-2), ಶಾಲಾ ಶಿಕ್ಷಣ ಇಲಾಖೆ ರವರು ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಪದವಿ ಪೂರ್ವ / ಪ್ರಾಥಮಿಕ / ಆಡಳಿತ / ಸಾಮಾನ್ಯ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.